# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ:ಬೆಂ.ಅ.ಪ್ರಾ/ನಮ/ಅ.ಸ/ಅ.ಅ-1/ತಾ.ಸ-4/ಎನ್.ಪಿ.ಕೆ.ಎಲ್/01/2022-23
No.

ದಿನಾಂಕ : 15.12.2022
Date :

ಅನುಸೂಚಿ-ಎ 5
(ಉಪವಿಧಿ ಸಂಖ್ಯೆ:4.1)
**ನಕ್ಷೆ ಮಂಜೂರಾತಿ ಪತ್ರ**

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಶ್ರೀಮತಿ/ಶ್ರೀ

M/s DS Max Properties Pvt.LTD.,
No.1854, 17th Main, 30th B Cross,
HBR layout, 1st Stage, 5th Block,
Bangalore-560 043.

ಮಾನ್ಯರೆ,

ಅರ್ಜಿದಾರರಾದ ತಾವು ದಿನಾಂಕ: 07.09.2022 ರಲ್ಲಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಭೀಮನಕುಪ್ಪೆ ಗ್ರಾಮದ ಸರ್ವೆ ನಂ. 100 ರಲ್ಲಿನ 02ಎಕರೆ 36ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ 02ತಳ+ನೆಲ+14ಮೇಲಂತಸ್ತುಗಳನ್ನೊಳಗೊಂಡ 600 ವಸತಿ ಘಟಕಗಳ ಕಟ್ಟಡಕ್ಕೆ ನಕ್ಷೆ ಮಂಜೂರಾತಿ ನೀಡಲು ಕೋರಿದ್ದು, ಅದರಂತೆ, ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ.5033, ದಿನಾಂಕ: 15.11.2022 ರಂದು ಅನುಮೋದನೆ ನೀಡಿದ್ದು, ನಿರ್ಮಾಣದಾರರು ಚಲನ್ ಸಂಖ್ಯೆ: GN22124774, ದಿನಾಂಕ: 08.12.2022 ರಂದು ಒಟ್ಟು ರೂ. 1,33,67,450/- ಗಳನ್ನು ಪಾವತಿಸಿರುತ್ತಾರೆ. ಅದರಂತೆ ದಿನಾಂಕ: 15.12.2022 ರಲ್ಲಿ ನಕ್ಷೆ ಮಂಜೂರಾತಿ ನೀಡಿದ್ದು, ಸದರಿ ಮಂಜೂರಾತಿಯು ದಿನಾಂಕ: 15.12.2022 ರಿಂದ ದಿನಾಂಕ: 14.12.2024 ವರೆಗಿನ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ. ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ನೀಡಲಾಗಿದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

**ಷರತ್ತುಗಳು**

1) ಪ್ರಾಧಿಕಾರದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಪ್ರದರ್ಶಿಸತಕ್ಕದ್ದು.
2) ಸಂಬಂಧಪಟ್ಟ ಪ್ರಾಧಿಕಾರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರಿಗೆ ಅರ್ಜಿ ಸಲ್ಲಿಸಿ ಪ್ರಾರಂಭ ಮಾಡಲು ಸೂಕ್ತ ಅನುಮತಿ ಪತ್ರ ಪಡೆಯತಕ್ಕದ್ದು.
3) ಮಂಜೂರಾತಿಯಾದ ನಕ್ಷೆಯ ಪ್ರಕಾರ ಕಟ್ಟಡ ನಿರ್ಮಾಣ ಮಾಡತಕ್ಕದ್ದು.
4) ಪೂರ್ಣಗೊಂಡ ಕಟ್ಟಡ ಅಥವಾ ಮನೆಯನ್ನು ವಾಸಕ್ಕೆ ಉಪಯೋಗಿಸುವ ಮೊದಲು ಸಂಬಂಧಪಟ್ಟ ಅಧಿಕಾರಿಗಳಿಂದ (ಪ್ರಾಧಿಕಾರದ) ವಾಸಯೋಗ್ಯ ಅನುಮತಿ ಪತ್ರವನ್ನು ಪಡೆಯತಕ್ಕದ್ದು.
5) ನಿವೇಶನದ ಸುತ್ತಳತೆಯಲ್ಲಿ ಹಸಿರು ಸಸಿಗಳನ್ನು ನೆಡುವುದು.
6) ಇವುಗಳೊಂದಿಗೆ ಈ ಪುಟದ ಹಿಂಬಾಗದಲ್ಲಿ ನಮೂದಿಸಿರುವ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

ಪುಟ ಸಂಖ್ಯೆ: 2 ಕ್ಕೆ ಮುಂದುವರೆದಿದೆ...

15/12/22
ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು 560 020
T. Chowdaiah Road, Kumarapark West, Bangalore 560 020, Facsimile : 2334 5799, E-mail : bda@vsnl.com

## -:ಷರತ್ತುಗಳು:-

1) ಕಟ್ಟಡದ ಕಾಮಗಾರಿಯ ಆರ್.ಸಿ.ಸಿ ಕಂಬಗಳು ನೆಲಮಟ್ಟಕ್ಕೆ ಎತ್ತರಿಸಿದ ನಂತರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

2) ಬಂಡಿದಾರಿ / ರಾಜ ಕಾಲುವೆ / ಮಳೆ ನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು/ಪ್ರಶ್ನಿತ ಪ್ರದೇಶದ ಉತ್ತರ ದಿಕ್ಕಿನಲ್ಲಿರುವ /ಬಫರ್ (ಪ್ರದೇಶದಲ್ಲಿ) ಜಮೀನಿನ ವಿಸ್ತೀರ್ಣದಲ್ಲಿ ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.

3) ಅಭಿವೃದ್ಧಿದಾರರು ಭದ್ರತಾ ಸಿಬ್ಬಂಧಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

4) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ, ಬಿಡಿಎ / ಬಿಬಿಎಂಪಿ / ನಗರ ಸಭೆ / ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

5) ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲ ಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು.

6) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

7) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

8) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.

9) ಅಭಿವೃದ್ಧಿದಾರರು ಕಟ್ಟಡಗಳಿಗೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

10) ಅಭಿವೃದ್ಧಿದಾರರು ಟ್ರಾನ್ಸ್ ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು, ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.

11) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಬ್ದಾರರಾಗಿರತಕ್ಕದ್ದು. ಕಟ್ಟಡದ ವಿನ್ಯಾಸದ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾಬ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಎಲ್ಲಾ ಸೂಕ್ತ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

12) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.

ಪುಟ ಸಂಖ್ಯೆ: 3 ಕ್ಕೆ ಮುಂದುವರೆದಿದೆ...

15/12/22

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

13) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

14) ಕಟ್ಟಡದ ಕಾಮಗಾರಿ ಆರಂಭಿಸುವ ಮುನ್ನ ಅರ್ಜಿದಾರರು ಲೈಸನ್ಸ್ ಅನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯತಕ್ಕದ್ದು.

15) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಬ್ದಾರರಾಗಿರುವುದಿಲ್ಲ.

16) ಅಭಿವೃದ್ಧಿದಾರರ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಾಲಾತಿ ನೀಡಿದ್ದಲ್ಲಿ, ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.

17) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯನ್ನು ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಬಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

18) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.

19) ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ದ ಮಾಲಿನ್ಯ ತಡೆಗಟ್ಟುವ ಸಂಬಂಧ, ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ಸಲಹೆಯಂತೆ ಕಡ್ಡಾಯವಾಗಿ ಅಳವಡಿಸತಕ್ಕದ್ದು.

20) ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

21) ಅಭಿವೃದ್ಧಿದಾರರು ಸಿಟಿ ಮಾಸ್ಟರ್ ಪ್ಲಾನ್ ಗಳಲ್ಲಿ ಗುರುತಿಸಿರುವಂತೆ ವಿದ್ಯುತ್ ವಾಹನಗಳ ಚಾರ್ಜಿಂಗ್ ಗಳಿಗೆ ಸೂಕ್ತವಾದ ಮೀಸಲು ಸ್ಥಳಗಳನ್ನು ಕಾಯ್ದಿರಿಸತಕ್ಕದ್ದು.

22) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರಿಂದ STP ಗೆ ಸಂಬಂಧಿಸಿದಂತೆ ನಿರಾಕ್ಷೇಪಣಾ ಪತ್ರ (CFE) ಅನ್ನು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಮುನ್ನ ಪಡೆದು ಸಲ್ಲಿಸುವುದು.

23) ನೀರು ಸರಬರಾಜುಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಯಿಂದ ನಿರಾಪೇಕ್ಷಣಾ ಪತ್ರವನ್ನು ಪಡೆದು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಮುನ್ನ ಪಡೆದು ಸಲ್ಲಿಸುವುದು.

24) SEIAA ಇಲಾಖೆಯಿಂದ ನಿರಾಪೇಕ್ಷಣಾ ಪತ್ರ ಪಡೆದು ಪ್ರಾರಂಭಿಕ ಪ್ರಮಾಣ ಪತ್ರ ಸಲ್ಲಿಸುವ ಮುನ್ನ ಪಡೆದು ಸಲ್ಲಿಸುವುದು.

25) ಗೌರವಾನ್ವಿತ ರಾಷ್ಟ್ರೀಯ ಹಸಿರು ನ್ಯಾಯಪೀಠ ರವರ ಪತ್ರ ಸಂಖ್ಯೆ: PCB/031/C&D/2016/5392/2020-21 ದಿ: 25.02.2021 ರಂತೆ Construction and Demolition (C & D) ಕಸವನ್ನು ವಿಲೆ ಮಾಡುವ ಬಗ್ಗೆ ನಿರ್ವಹಣೆ ಯೋಜನೆಯನ್ನು ULB (Urban Local Body) ರವರಿಗೆ ಸಲ್ಲಿಸಿ ಅನುಮೋದನೆ ಪಡೆದು ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಮುನ್ನ ಸಲ್ಲಿಸುವುದು.

16/12/22

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಯಥಾಪ್ರತಿಯನ್ನು ಕಾರ್ಯಪಾಲಕ ಅಭಿಯಂತರು, ಎನ್.ಪಿ.ಕೆ.ಎಲ್ ವಿಭಾಗ, 11/ಇ, 100 ಅಡಿ ರಸ್ತೆ, ವಿಶ್ವೇಶ್ವರಯ್ಯ 5ನೇ ಬ್ಲಾಕ್ ಬಡಾವಣೆ, ಬೆಂಗಳೂರು ರವರ ಮಾಹಿತಿಗಾಗಿ ರವಾನಿಸಿದೆ.

Housiey.com